ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2016–17** **ದಿನಾಂಕ: 01–02–2017**

## ಪತ್ರಿಕಾ ಆಮಂತ್ರಣ

1. Workshop on Karnataka Multi Sectoral Nutrition Pilot Projects

Ianuguration:
Subhash Chandra Khuntia, Chief Secretary, Govt. of Karnataka
Date: 02-02-2017 Thursday, Time: 10.00 a.m.
Venue: Hotel Capitol, Raj Bhavan Road, Bangalore

2. **9ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವ ಉದ್ಘಾಟನಾ ಸಮಾರಂಭ:**

**ಉದ್ಘಾಟನೆ:**
**ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**

**ಅಧ್ಯಕ್ಷತೆ:**
**ಆರ್. ರೋಷನ್‌ಬೇಗ್. ನಗರಾಭಿವೃದ್ಧಿ ಮತ್ತು ಹಜ್ ಸಚಿವರು,**

**ದಿನಾಂಕ: 02–02–2017 ಬುಧವಾರ, ಸಮಯ: ಸಂಜೆ 6.00 ಗಂಟೆಗೆ**
**ಸ್ಥಳ: ವಿಧಾನಸೌಧದ ಮುಂಭಾಗ (ಪೂರ್ವದ್ವಾರ ಮೆಟ್ಟಿಲು), ಬೆಂಗಳೂರು.**

## ಪತ್ರಿಕಾ ಪ್ರಕಟಣೆ

# 9ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವ ಉದ್ಘಾಟನೆ

**ಬೆಂಗಳೂರು, ಫೆಬ್ರವರಿ 1 , (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಚಲನಚಿತ್ರ ಅಕಾಡೆಮಿ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಸಹಯೋಗದೊಂದಿಗೆ 9ನೇ ಬೆಂಗಳೂರು

ಅಂತರರಾಷ್ಟ್ರೀಯ ಸಿನಿಮೋತ್ಸವ ಉದ್ಘಾಟನಾ ಕಾರ್ಯಕ್ರಮವನ್ನು ಫೆಬ್ರವರಿ 2 ರಂದು ಸಂಜೆ 6.00 ಗಂಟೆಗೆ ವಿಧಾನಸೌಧದ ಮುಂಭಾಗ ( ಪೂರ್ವದ್ವಾರ ಮೆಟ್ಟಿಲು), ಬೆಂಗಳೂರು ಇಲ್ಲಿ ಹಮ್ಮಿಕೊಂಡಿದೆ.

9ನೇ ಬೆಂಗಳೂರು ಅಂತರರಾಷ್ಟ್ರೀಯ ಸಿನಿಮೋತ್ಸವ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದಾರೆ.

ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಹಾಗೂ ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷ ಕೆ.ಬಿ. ಕೋಳಿವಾಡ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳುವರು.

ಬೆಂಗಳೂರು ಅಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್, ಲೋಕೋಪಯೋಗಿ ಸಚಿವ ಹೆಚ್.ಸಿ. ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವ ಶ್ರೀಮತಿ ಉಮಾಶ್ರೀ, ಪ್ರವಾಸೋದ್ಯಮ ಹಾಗೂ ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಪ್ರಿಯಾಂಕ್ ಎಂ. ಖರ್ಗೆ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ, ವಿಧಾನಸಭೆ ವಿರೋಧ ಪಕ್ಷದ ನಾಯಕ ಜಗದೀಶ್ ಶೆಟ್ಟರ್, ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಖ್ಯಾತ ಬಂಗಾಳಿ ಚಲನಚಿತ್ರ ನಿರ್ದೇಶಕ ಹಾಗೂ ಕವಿ ಬುದ್ದದೇವ್‌ದಾಸ್ ಗುಪ್ತ ಅವರು ಚಿತ್ರೋತ್ಸವ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡುವರು. ಖ್ಯಾತ ಕನ್ನಡ ಚಲನಚಿತ್ರ ಪುನೀತ್ ರಾಜ್‌ಕುಮಾರ್ ಹಾಗೂ ಈಜಿಪ್ಟ್‌ನ ಖ್ಯಾತ ಚಲನಚಿತ್ರ ನಿರ್ದೇಶಕ ಶ್ರೀಮತಿ ಹಲಾ ಕಲೀಲ್ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳಲಿದ್ದಾರೆ.

ದಕ್ಷಿಣ ಭಾರತದ ಖ್ಯಾತ ಚಲನಚಿತ್ರ ಕಲಾವಿದೆ ಶ್ರೀಮತಿ ಸುಹಾಸಿನಿ ಹಾಗೂ ಖ್ಯಾತ ಚಲನಚಿತ್ರ ಕಲಾವಿದ ರಮೇಶ್ ಅರವಿಂದ ಅವರು ಕಾರ್ಯಕ್ರಮದ ಸಂಯೋಜನೆ ನಡೆಸಿಕೊಡಲಿದ್ದಾರೆ.

ಇದೇ ಸಂದರ್ಭದಲ್ಲಿ ವಿಧಾನಸೌಧದ ಭವ್ಯ ಹಿನ್ನೆಲೆಯಲ್ಲಿ ಕನ್ನಡ ಚಿತ್ರೋದ್ಯಮ ಇತಿಹಾಸ ಹಾಗೂ ಕಲೆ, ಸಂಸ್ಕೃತಿ ಚಿತ್ರ ಮೂಡಿಸುವ ವಿಡಿಯೋ ಮ್ಯಾಪಿಂಗ್ ಪ್ರದರ್ಶವನ್ನು ಸಹ ಹಮ್ಮಿಕೊಳ್ಳಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

**ಶೀಘ್ರದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಾಗೂ ಹೆಣ್ಣು ಮಕ್ಕಳ ಕಾರ್ಯನೀತಿ ಅನುಷ್ಠಾನ- ಉಮಾ ಮಹದೇವನ್**

ಬೆಂಗಳೂರು, ಫೆಭ್ರವರಿ 1, (ಕರ್ನಾಟಕ ವಾರ್ತೆ)

ಮಕ್ಕಳ ಹಕ್ಕುಗಳ, ಮಕ್ಕಳ ಕಾಯ್ದೆಗಳನ್ನು ಭದ್ರಗೊಳಿಸುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಯುನಿಸೆಫ್ ಸಹಾಯದೊಂದಿಗೆ ಸ್ಥಿರಪಡಿಸಿರುವ ಕರ್ನಾಟಕ ರಾಜ್ಯ ಮಕ್ಕಳ ಹಾಗೂ ಹೆಣ್ಣು ಮಕ್ಕಳ ಕಾರ್ಯನೀತಿಯ ಕರಡನ್ನು ಸಿದ್ದಪಡಿಸಲಾಗಿದೆ ಎಂದು ಇಲಾಖೆಯ ಪ್ರಧಾನ ಕಾರ್ಯದರ್ಶಿ ಉಮಾಮಹದೇವನ್ ತಿಳಿಸಿದರು.

ಅವರು ಇಂದು ವಿಕಾಸ ಸೌಧದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಾಗೂ ಹೆಣ್ಣು ಮಕ್ಕಳ ಕಾರ್ಯನೀತಿಗೆ ಸಂಬಂಧಿಸಿದ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಕ್ಕಳ ವಿರುದ್ಧದ ದೌರ್ಜನ್ಯ, ಬಾಲಕಾರ್ಮಿಕ ಪದ್ಧತಿ ಮಕ್ಕಳ ಲೈಂಗಿಕ ಶೋಷಣೆ ಮುಂತಾದವುಗಳ ತಡೆಗೆ ಇಲಾಖೆ ಹಾಗೂ ಸಮಾಜ ಪಣ ತೋಡಬೇಕಿದೆ. ಮಕ್ಕಳಲ್ಲಿ ಸಕಾರಾತ್ಮಕ ಧೋರಣೆಯನ್ನು ಅವರ ಪೋಷಕರು, ಶಿಕ್ಷಕರು ಬೆಳೆಸಬೇಕು. ಮಕ್ಕಳ ಹಾಗೂ ಹೆಣ್ಣು ಮಕ್ಕಳ ಹೊಸ ಕಾರ್ಯನೀತಿ ಅನುಷ್ಠಾನಕ್ಕೆ ಎಲ್ಲರ ಸಲಹೆ ಸೂಚನೆಗಳ ಅಗತ್ಯ ಇದೆ ಎಂದರು.

ಸಂವಾದದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಕಾರ್ಯನೀತಿಯ ಕುರಿತು ಮಾತನಾಡಿದ ಚೈಲ್ಡ್‌ರೈಟ್ ಟ್ರಸ್ಟ್‌ನ ಕಾರ್ಯ ನಿರ್ವಾಹಕ ನಿರ್ದೇಶಕ ವಾಸುದೇವ ಶರ್ಮ ಲಿಂಗ ಅನುಪಾತ, ಮಕ್ಕಳ ಪೌಷ್ಠಿಕತೆ, ಆರೋಗ್ಯ ಶಿಕ್ಷಣ ಮತ್ತು ಅಭಿವೃದ್ಧಿ, ಮಕ್ಕಳ ಸಂರಕ್ಷಣೆ ಮತ್ತು ಸುರಕ್ಷತೆ, ಮಕ್ಕಳ ಅಪರಾಧ ತಡೆ, ಮಕ್ಕಳ ಸಾಗಣೆ ಹೀಗೆ ಹಲವು ವಿಷಯಗಳ ಕುರಿತು ಈ ಕಾರ್ಯನೀತಿಯಲ್ಲಿ ಉಲ್ಲೇಖಿಸಲಾಗಿದೆ. ಇದನ್ನು ಅನುಮೋದಿಸಲು ಸಚಿವರ ಮಟ್ಟದ ಸಮಿತಿ ರಚಿಸಿ ಅಂತಿಮಗೊಳಿಸಬೇಕಿದೆ ಎಂದರು.

ಯುನಿಸೆಫ್ ತಜ್ಞರಾದ ಶ್ರೀ ಲಕ್ಷ್ಮಿಗುರುರಾಜ್ ಮಾತನಾಡಿ, ಕರ್ನಾಟಕದಲ್ಲಿ ಬಿಜಾಪುರ, ಬೆಳಗಾವಿ, ಬಾಗಲಕೋಟೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಗಂಡು-ಹೆಣ್ಣು ಲಿಂಗ ಅನುಪಾತ ಕಂಡುಬಂದಿದೆ. ಹೆಣ್ಣುಭ್ರೂಣ ಹತ್ಯೆಯ ಬಗೆಗೆ ನಿಗಾವಹಿಸಬೇಕಿದೆ. ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವುದರಿಂದ ಅವರು ಸ್ವಾವಲಂಭಿಗಳಾಗಿ ಬದುಕುತ್ತಾರೆ ಎಂದರು. ಕಾರ್ಯಕ್ರಮದಲ್ಲಿ ಸಭಿಕರು ಸಂವಾದವನ್ನು ನಡೆಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕರಾದ ದೀಪಾ ಚೋಳನ್ ಸ್ವಾಗತಿಸಿದರು. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ನಾಗಕಲಕ್ಷ್ಮೀಬಾಯಿ, ರಾಜ್ಯ ಮಕ್ಕಳ ಆಯೋಗದ ಅಧ್ಯಕ್ಷರಾದ ಕೃಪಾ, ಬಾಲವಿಕಾಸ ಅಕಾಡೆಮಿ ಅಧ್ಯಕ್ಷರು, ಯುನಿಸೆಫ್ ಇತರ ತಜ್ಞರು ಉಪಸ್ಥಿತರಿದ್ದರು.

ಎಸ್‌ಎಂ/ಕವನ/ಕೆಎಂ

ಛಾಯಾಚಿತ್ರ ಶೀರ್ಷಿಕೆ:

ಬೆಂಗಳೂರು ಚಿತ್ರಕಲಾ ಪರಿಷತ್‌ನಲ್ಲಿ ಫೆಬ್ರವರಿ 1 ರಿಂದ ಪ್ರಾರಂಭವಾದ ಗಾಂಧಿ ಶಿಲ್ಪ ಬಜಾರ್‌ನ್ನು ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮದ ಅಧ್ಯಕ್ಷರಾ ಶ್ರೀಮತಿ ಕಮಲಮ್ಮ ಅವರು ಉದ್ಘಾಟಿಸಿದರು.

## ಡಾ ಸರೋಜಿನಿ ಮಹಿಷಿ ವರದಿಯ ಪರಿಷ್ಕರಣಾ ಸಮಿತಿ ವರದಿ ಕಾನೂನು ವ್ಯಾಪ್ತಿಗೆ ತರಲು ಚಿಂತನೆ : ಸಿದ್ದರಾಮಯ್ಯ

ಬೆಂಗಳೂರು, ಫೆಬ್ರವರಿ 01 (ಕರ್ನಾಟಕ ವಾರ್ತೆ) :

ಡಾ ಸರೋಜಿನಿ ಮಹಿಷಿ ವರದಿ ಜಾರಿಗೆ ಸಂಬಂಧಿಸಿದಂತೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ಕಾನೂನು ಇಲಾಖೆ ಸಲಹೆ ಪಡೆದು ಸೂಕ್ತ ಕಾನೂನು ತರಲು ಚಿಂತಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಮುಖ್ಯಮಂತ್ರಿ ಅವರ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ನಡೆದ ಸಮಾರಂಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ ಎಸ್ ಜಿ ಸಿದ್ದರಾಮಯ್ಯ ಅವರು ಡಾ ಸರೋಜಿನಿ ಮಹಿಷಿ ವರದಿಯ ಪರಿಷ್ಕರಣಾ ಸಮಿತಿಯು ನೀಡಿದ ವರದಿಯನ್ನು ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಿತಿಯು ಪರಷ್ಕೃತ ವರದಿಯನ್ನು ಪ್ರಮುಖವಾಗಿ ಎರಡು ಭಾಗಗಳಾಗಿ ವಿಂಗಡಿಸಿ ಸಲ್ಲಿಸಿದೆ. ಇದೀಗ ತಾನೇ ವರದಿ ತಮ್ಮ ಕೈ ಸೇರಿದೆ. ತಾವಿನ್ನೂ ವರದಿಯನ್ನು ಓದಿಲ್ಲ. ಈ ಬಗ್ಗೆ ಕೂಲಂಕುಷ ಅಧ್ಯಯನ ನಡೆಸಿ ಕಾನೂನು ತಜ್ಞರ ಜೊತೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಹಾಲಿ ಚಾಲ್ತಿಯಲ್ಲಿ ಇರುವ ಮೀಸಲಾತಿ ವ್ಯವಸ್ಥೆ ಮಹತ್ವ ಕಳೆದುಕೊಳ್ಳುತ್ತಿದೆ ಎಂಬುದು ತಮ್ಮ ಭಾವನೆ ಎಂದು ಹೇಳಿದ ಸಿದ್ದರಾಮಯ್ಯ ಅವರು ಇದಕ್ಕೆ ಕಾರಣ ಖಾಸಗಿ ಕ್ಷೇತ್ರದಲ್ಲಿ ಉದ್ಯೋಗಗಳು ಹೆಚ್ಚುತ್ತಿರುವುದು, ಕೈಗಾರಿಕೆಗಳ ಬೆಳವಣಿಗೆ ಹಾಗೂ ಖಾಸಗಿ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿ ಇವನ್ನು ಗಮನಿಸಿ ಮೀಸಲಾತಿ ನಿಗದಿಪಡಿಸಬೇಕು ಎಂದು ಅಭಿಪ್ರಾಯಪಟ್ಟರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳಲ್ಲಿ ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲಾತಿ, ಕನ್ನಡಿಗರಿಗೆ ಉದ್ಯೋಗ, ಕನ್ನಡದಲ್ಲಿ ಪತ್ರ ವ್ಯವಹಾರ ಮತ್ತು ಕನ್ನಡಿಗರಿಗೆ ಎಲ್ಲಾ ರಂಗಗಳಲ್ಲೂ ಆಧ್ಯತೆ ದೊರೆಯಲೇಬೇಕು ಎಂದು ತಿಳಿಸಿದ ಮುಖ್ಯಮಂತ್ರಿಯವರು ಇದನ್ನು ಯಾರಿಂದಲೂ ತಪ್ಪಿಸಲಾಗದು ಎಂದು ಸ್ಪಷ್ಟಪಡಿಸಿದರು.

ಡಾ ಸರೋಜಿನಿ ಮಹಿಷಿ ವರದಿಯನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಇಂದಿನ ಕಾಲಘಟ್ಟಕ್ಕೆ ಹೊಂದುವಂತೆ ಸಮಗ್ರ ಪರಿಷ್ಕೃತ ವರದಿಯನ್ನು ಇಂದು ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಮಾತನಾಡಿದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ ಎಸ್. ಜಿ. ಸಿದ್ದರಾಮಯ್ಯ ಅವರು ಪರಿಷ್ಕೃತ ವರದಿಯನ್ನು ಖಾಯಂ ಮಾಡಲು ಅವಶ್ಯ ಇರುವ 14 ಅಂಶಗಳ ಪಟ್ಟಿಯನ್ನು ಮಾಡಿ ಸರ್ಕಾರಕ್ಕೆ ಸಲ್ಲಿಸಲಾಗಿದೆ. ವರದಿಯಲ್ಲಿನ ಅಂಶಗಳನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಕಾಯ್ದೆ ರೂಪಿಸಬೇಕು ಎಂದರು.

ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಟಿ. ಬಿ. ಜಯಚಂದ್ರ, ಅರಣ್ಯ ಸಚಿವ ರಮಾನಾಥ್ ರೈ, ಡಾ ಸರೋಜಿನಿ ಮಹಿಷಿ ವರದಿಯ ಪರಿಷ್ಕರಣಾ ಸಮಿತಿಯ ಸದಸ್ಯರಾದ ಗೊ. ರು. ಚೆನ್ನಬಸಪ್ಪ, ಹೇಮಲತಾ ಮಹಿಷಿ, ರಾ. ನಂ. ಚಂದ್ರಶೇಖರ್, ಸಾಹಿತಿಗಳಾದ ಚಂದ್ರಶೇಖರ್ ಪಾಟೀಲ, ಪ್ರೋ ಮರಳಸಿದ್ದಪ್ಪ, ರಾಜ್ಯ ವಿಧಾನ ಪರಿಷತ್ ಸದಸ್ಯರಾದ ವಿ. ಎಸ್. ಉಗ್ರಪ್ಪ ಹಾಗೂ ಹೆಚ್. ಎಂ. ರೇವಣ್ಣ, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು, ಪ್ರಾಧಿಕಾರದ ಮಾಜಿ ಅಧ್ಯಕ್ಷ ಮುಖ್ಯಮಂತ್ರಿ ಚಂದ್ರು ಹಾಗೂ ವಿವಿಧ ಕನ್ನಡ ಪರ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕೆ ಪಿಪಿ

## ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಮುಖ್ಯಮಂತ್ರಿ ಪರಿಹಾರ ನಿಧಿಗೆ ಮೂರು ಕೋಟಿ ರೂ ಚೆಕ್ ಸಲ್ಲಿಕೆ

**ಬೆಂಗಳೂರು, ಫೆಬ್ರವರಿ 01 (ಕರ್ನಾಟಕ ವಾರ್ತೆ) :**

ಅರಣ್ಯ ಸಚಿವರಾದ ರಮಾನಾಥ್ ರೈ ಅವರು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಮುಖ್ಯಮಂತ್ರಿ ಪರಿಹಾರ ನಿಧಿಗೆ ಮೂರು ಕೋಟಿ ರೂ ಚೆಕ್ಕನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಲ್ಲಿ ಇಂದು ನೀಡಿದರು.

ಅಲ್ಲದೆ, ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಅವರ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸರಳ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನೌಕರರ ಸಂಘವು ಹೊರತಂದಿರುವ 2017 ನೇ ಸಾಲಿನ ನೂತನ ದಿನಚರಿಯನ್ನು ಮುಖ್ಯಮಂತ್ರಿ ಬಿಡುಗಡೆ ಮಾಡಿದರು. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಕೆ ಪಿ ಪಿ

# ಮಹಿಳೆಯರಿಗೆ ಪೌಷ್ಟಿಕಾಂಶದ ಮಾಹಿತಿ ಇರುವುದು ಅವಶ್ಯಕ

**ಬೆಂಗಳೂರು, ಫೆಬ್ರವರಿ 1 , (ಕರ್ನಾಟಕ ವಾರ್ತೆ)**

ಮಹಿಳೆಯರಿಗೆ ಅವಶ್ಯಕವಾಗಿ ಪೌಷ್ಟಿಕಾಂಶದ ಕುರಿತು ಮಾಹಿತಿ ಇರಬೇಕೆಂದು ವಿಜ್ಞಾನ ಅಕಾಡೆಮಿಯ ಅಧ್ಯಕ್ಷರಾದ ಮಹಾಬಲೇಶ್ವರ ಅವರು ಅಭಿಪ್ರಾಯಪಟ್ಟರು.

ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ಜೀವ ರಸಾಯನ ವಿಭಾಗದ ವತಿಯಿಂದ ಏರ್ಪಡಿಸಲಾಗಿದ್ದ 'ಪ್ರೊಟೀನ್ಸ್ ಇನ್ ಡ್ರಗ್ ಡಿಸ್ಕವರಿ ಅಂಡ್ ಡಿಸೈನ್' ಎಂಬ ವಿಷಯದ ಕುರಿತು ಏರ್ಪಡಿಸಲಾಗಿದ್ದ ಎರಡು ದಿನಗಳ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆಯರಿಗೆ ಪೌಷ್ಟಿಕಾಂಶದ ಅಗತ್ಯತೆ ಹೆಚ್ಚಾಗಿರುತ್ತದೆ. ಆದ್ದರಿಂದ ಪೌಷ್ಠಿಕಾಂಶದ ಕುರಿತಂತೆ ಮಹಿಳಾ ಕಾಲೇಜಿನಲ್ಲಿ ಏರ್ಪಡಿಸಿರುವ ಈ ವಿಚಾರ ಸಂಕಿರಣದಿಂದ ಇಲ್ಲಿನ ವಿದ್ಯಾರ್ಥಿನಿಯರಿಗೆ ಮತ್ತು ಶಿಕ್ಷಕರಿಗೆ ಉಪಯುಕ್ತ ಮಾಹಿತಿ ದೊರಕಿದಂತಾಗುತ್ತದೆ ಎಂದರು.

ಮಹಾರಾಣಿ ಕ್ಲಸ್ಟರ್ ಯೂನಿವರ್ಸಿಟಿಗೆ ವಿಶೇಷ ಅಧಿಕಾರಿ ಮತ್ತು ಹಿರಿಯ ಪತ್ರಕರ್ತ ರವೀಂದ್ರ ರೇಷ್ಮೆ ಅವರು ಮಾತನಾಡಿ ಮಹಾರಾಣಿ ಮಹಿಳಾ ಕಾಲೇಜು ಖಾಸಗಿ ಕಾಲೇಜಿಗಿಂತ ಒಂದು ಹೆಜ್ಜೆ ಮುಂದಿದ್ದು, ಎಲ್ಲಾ ಸೌಲಭ್ಯಗಳನ್ನು ಹೊಂದಿದೆ. ಸರ್ಕಾರ ತಮಗೆ ನೀಡಿರುವ ಜವಾಬ್ದಾರಿಯನ್ನು ಉತ್ತಮವಾಗಿ ನಿಭಾಯಿಸುವ ಮೂಲಕ ಕಾಲೇಜಿನ ಅಭಿವೃದ್ಧಿಗೆ ಶ್ರಮಿಸುತ್ತೇನೆಂದು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಕೆ.ಟಿ. ಮಂಜುನಾಥ್, ಜೀವ ರಸಾಯನ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಆಸ್ಮಾಸಾಕಿಬ್, ರಸಾಯನ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಮೈಥಿಲಿ ಅವರು ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ವಿಚಾರ ಸಂಕಿರಣದಲ್ಲಿ ಭಾಗವಹಿಸಿದ್ದರು.

**ಎಸ್‌ಎಂ:ಜೆಡಿ:ಜಿಪಿಆರ್.**

# ಬಲಗೈನ ಮಧ್ಯದ ಬೆರಳಿಗೆ ಶಾಯಿ

**ಬೆಂಗಳೂರು, ಫೆಬ್ರವರಿ 1 , (ಕರ್ನಾಟಕ ವಾರ್ತೆ)**

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಫೆಬ್ರವರಿ 3 ರಂದು ನಡೆಯಲಿರುವ ಉಪ ಚುನಾವಣೆಯಲ್ಲಿ ಭಾರತ ಚುನಾವಣಾ ಆಯೋಗದ

ನಿರ್ದೇಶನದಂತೆ ಮತದಾರರಿಗೆ ಅಳಿಸಲಾಗದ ಶಾಯಿಯನ್ನು ಬಲಗೈನ ಮಧ್ಯದ ಬೆರಳಿಗೆ ಹಚ್ಚಲಾಗುವುದು ಎಂದು ಚುನಾವಣಾಧಿಕಾರಿ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತ, ಬೆಂಗಳೂರು ವಿಭಾಗ, ಬೆಂಗಳೂರು, ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಎಸ್‌ಎಂ;ಜೆಡಿ:ಜಿಪಿಆರ್.**

# 13 ನೇ ಕೃಷಿ ವಿಜ್ಞಾನ ಕಾಂಗ್ರೆಸ್ – 2017

**ಬೆಂಗಳೂರು, ಫೆಬ್ರವರಿ 1, (ಕರ್ನಾಟಕ ವಾರ್ತೆ)**

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಫೆಬ್ರವರಿ 21 ರಿಂದ 24 ರವರೆಗೆ ಜಿಕೆವಿಕೆಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನದಲ್ಲಿ 13ನೇ ಕೃಷಿ ವಿಜ್ಞಾನ ಕಾಂಗ್ರೆಸ್ – 2017 ಹಮ್ಮಿಕೊಂಡಿದೆ.

ಈ ಸಂಬಂಧ ವಸ್ತು ಪ್ರದರ್ಶನವನ್ನು ಹಮ್ಮಿಕೊಂಡಿದ್ದು, ಈ ವಸ್ತು ಪ್ರದರ್ಶನದಲ್ಲಿ ಕೃಷಿ ವಿಶ್ವವಿದ್ಯಾನಿಲಯಗಳು, ಭಾರತೀಯ ಅನುಸಂದಾನ ಪರಿಷತ್ತಿನ ಸಂಸ್ಥೆಗಳು, ಅಭಿವೃದ್ಧಿ ಇಲಾಖೆಗಳು (ಕೃಷಿ, ತೋಟಗಾರಿಕೆ, ಪಶು ವೈದ್ಯಕೀಯ, ರೇಷ್ಮೆ, ಅರಣ್ಯ ಮತ್ತು ಮೀನುಗಾರಿಕೆ), ಖಾಸಗಿ ಸಂಸ್ಥೆಗಳು, ಬ್ಯಾಂಕ್‌ಗಳು, ಬಿತ್ತನೆ ಬೀಜದ ಕಂಪನಿಗಳು, ಸಸ್ಯ ಸಂರಕ್ಷಣೆ ಕಂಪನಿಗಳು, ರಸಗೊಬ್ಬರ ಕಂಪನಿಗಳು, ಕೃಷಿ ಯಂತ್ರೋಪಕರಣ ಕಂಪನಿಗಳು ಮತ್ತು ಇನ್ನಿತರೆ ಕೃಷಿಗೆ ಸಂಬಂಧಿಸಿದ ಸಂಘ ಸಂಸ್ಥೆಗಳು ಪಾಲ್ಗೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು, ಮೊಬೈಲ್ ಸಂಖ್ಯೆ: 944055836 ಅಥವಾ ದೂರವಾಣಿ ಸಂಖ್ಯೆ: 080–23418883,ಇ–ಮೇಲ್ deuasbangalore@gmail.com ಇವರನ್ನು ಸಂಪರ್ಕಿಸಬಹುದು.

**ಎಸ್‌ಎಂ:ಜೆಡಿ:ಜಿಪಿಆರ್.**

# ಆರೋಗ್ಯ ಸಚಿವರಿಂದ ಜೆ.ಪಿ ಪಾರ್ಕ್ ಡಯಾಲಿಸಿಸ್ ಕೇಂದ್ರದ ಪರಿಶೀಲನೆ

**ಬೆಂಗಳೂರು, ಫೆಬ್ರವರಿ 1 , (ಕರ್ನಾಟಕ ವಾರ್ತೆ)**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರಿಂದು ನಗರದ ಮತ್ತೀಕೆರೆಯ ಜೆ.ಪಿ ಪಾರ್ಕಿನಲ್ಲಿ ಶಾಸಕರ ಅನುದಾನದಡಿ ನೂತನವಾಗಿ ನಿರ್ಮಿಸಿರುವ ಡಯಾಲಿಸಿಸ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭ ಸುದ್ದಿಗಾರರೊಂದಿಗೆ ಮಾತನ್ನಾಡಿದ ಸಚಿವರು, ಜೆ.ಪಿ ಪಾರ್ಕಿನಲ್ಲಿ ಏಳು ಕೋಟಿ ರೂ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗಿರುವ 16 ಹಾಸಿಗೆಯುಳ್ಳ ಡಯಾಲಿಸಿಸ್ ಕೇಂದ್ರವು ಅಗ್ಗದ ದರದಲ್ಲಿ ಈ ಪ್ರದೇಶದಲ್ಲಿ ವಾಸವಿರುವ ಮಧ್ಯಮ ವರ್ಗದವರಿಗೆ ಮತ್ತು ಬಡವರಿಗೆ ಸೇವೆ ಒದಗಿಸಲಿದೆ ಎಂದ ಅವರು, ಅಂತೆಯೇ ಉದ್ಯಾನವನಕ್ಕೆ ವಾಯು ವಿಹಾರಕ್ಕೆಂದು ಬರುವ ಮಹಿಳಾ ಮತ್ತು ಪುರುಷರಿಗೆ ಇದೇ ಕಟ್ಟಡದಲ್ಲಿ ಪ್ರತ್ಯೇಕವಾಗಿ ಫಿಟ್‌ನೆಸ್ ಸೆಂಟರ್‌ಗಳನ್ನು ಸ್ಥಾಪಿಸಲಾಗಿದ್ದು ಇದರಿಂದ ಸಹ ಸಾರ್ವಜನಿಕರಿಗೆ ಬಹಳ ಉಪಯೋಗವಾಗಲಿದೆ ಎಂದರು.

ಆಧಾರ್ ಕಾರ್ಡ್ ಲಿಂಕ್ ಮಾಡುವ ಮೂಲಕ ಸಾರ್ವತ್ರಿಕ ಆರೋಗ್ಯ ಕಾರ್ಡ್‌ನ್ನು (ಯೂನಿವರ್ಸಲ್ ಹೆಲ್ತ್ ಕಾರ್ಡ್) ಎಲ್ಲರಿಗೂ ನೀಡುವ ಮೂಲಕ ಆರೋಗ್ಯ ಸೇವೆಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಈ ಸಂದರ್ಭ ತಿಳಿಸಿದರು.

ವಿವಿಧ ಆರೋಗ್ಯ ಸೇವೆಗಳಿಗೆ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಖಾಸಗಿ ಆಸ್ಪತ್ರೆಗಳಿಗೆ ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದ್ದು, ಆಸ್ಪತ್ರೆಗಳು ಉಳಿಕೆ ಲೆಕ್ಕ ನೀಡಿದಲ್ಲಿ ಉಳಿದ ಮೊತ್ತವನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು. ಖಾಸಗಿ ಆಸ್ಪತ್ರೆಗಳಿಗೆ ನಷ್ಟ ಉಂಟು ಮಾಡುವ ಯಾವುದೇ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಸಚಿವರು ಈ ಸಂದರ್ಭ ತಿಳಿಸಿದರು.

ಶಾಸಕ ಮುನಿರತ್ನ ಅವರು ಮಾತನ್ನಾಡಿ, ಈ ಪ್ರದೇಶದಲ್ಲಿ ಜನರಿಕ್ ಔಷಧಿ ಮಳಿಗೆ ಸ್ಥಾಪನೆಗೆ ಸಚಿವರಲ್ಲಿ ಕೋರಿಕೆ ಸಲ್ಲಿಸಿದ ಕೆಲವೇ ದಿನಗಳಲ್ಲಿ ಸಚಿವರು ಸ್ಪಂದಿಸಿ ಕ್ಷೇತ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿರುವುದು ಸಂತಸ ತಂದಿದೆ ಎಂದರು.

ಎಸ್‌ಎಂ/ಮಮತ

## ಮೊಬೈಲ್ ಫೋನ್ ದುರಸ್ತಿ ತರಬೇತಿ ಶಿಬಿರ

**ಬೆಂಗಳೂರು, ಫೆಬ್ರವರಿ 1 , (ಕರ್ನಾಟಕ ವಾರ್ತೆ)**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಯುವಕ/ಯುವತಿಯರಿಗಾಗಿ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ ಮೊಬೈಲ್ ಫೋನ್ ದುರಸ್ತಿ ತರಬೇತಿ ಶಿಬಿರವನ್ನು ಹಮ್ಮಿಕೊಂಡಿದೆ.

ಕನಿಷ್ಠ ಪಿ.ಯು.ಸಿ. (ಪಾಸ್/ಫೇಲ್) ವಿದ್ಯಾರ್ಹತೆ ಹೊಂದಿರುವ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, 100 ರೂ. ಗಳ ನೋಂದಣಿ ಶುಲ್ಕವಿರುತ್ತದೆ. ದಿನಾಂಕ: 10-02-2017 ರಿಂದ 22-02-2017 ರವರೆಗೆ ಒಟ್ಟು 13 ದಿನಗಳ ಈ ಶಿಬಿರವು ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದೆ.

ಹೊರ ಜಿಲ್ಲೆಗಳಿಂದ ಆಗಮಿಸುವ ಶಿಬಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದು, ಆಸಕ್ತ ಯುವಕ/ಯುವತಿಯರು ತಮ್ಮ ಜನ್ಮ ದಿನಾಂಕದ ದಾಖಲೆಯೊಂದಿಗೆ ಸಹಾಯಕ ನಿರ್ದೇಶಕರು, ರಾಜ್ಯ ಯುವಕೇಂದ್ರ, ನೃಪತುಂಗಾ ರಸ್ತೆ, ಬೆಂಗಳೂರು - 560 001 ಇವರನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080-22214911/9880839295 ಅನ್ನು ಸಂಪರ್ಕಿಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಎಸ್‌ಎಂ;ಜೆಡಿ:ಜಿಪಿಆರ್.**

## <u>ವೃತ್ತಿ, ನಿರೂಪಣಾ ಕೌಶಲ್ಯ ತರಬೇತಿ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ</u>

ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪರಿಶಿಷ್ಟ ಜಾತಿ/ಪಂಗಡದ ಪತ್ರಿಕೋದ್ಯಮ ಪದವಿ ಪಡೆದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿರುವ 'ವೃತ್ತಿ ಮತ್ತು ನಿರೂಪಣಾ ಕೌಶಲ್ಯ' ತರಬೇತಿಯ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಇಲಾಖಾ ಅಂತರ್‌ಜಾಲ ತಾಣ www.karnatakainformation.gov.in ನಲ್ಲಿ ಪ್ರಕಟಿಸಲಾಗಿದೆ.

ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಪ್ರದೇಶ ಉಪಯೋಜನೆಯಡಿ 2016-17 ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಗಿರಿಜನ ಸಮುದಾಯಕ್ಕೆ ಸೇರಿದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ಡಿಪ್ಲಮೋ ಇನ್ ಜರ್ನಲಿಸಂ ಹಾಗೂ ಆಡಿಯೋ ವಿಷುಯಲ್ ವಿಷಯಗಳಲ್ಲಿ ಪದವಿ ಪಡೆದ ಅಭ್ಯರ್ಥಿಗಳಿಗೆ ವೃತ್ತಿ ಕೌಶಲ್ಯತೆ ರೂಢಿಸಿಕೊಳ್ಳಲು 'ವೃತ್ತಿ ಮತ್ತು ನಿರೂಪಣಾ ಕೌಶಲ್ಯ' ತರಬೇತಿಯನ್ನು ಏರ್ಪಡಿಸಲಾಗಿದೆ.

'ವೃತ್ತಿ ಮತ್ತು ನಿರೂಪಣಾ ಕೌಶಲ್ಯ' ತರಬೇತಿಗಾಗಿ ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಮೆರಿಟ್ ಆಧಾರದ ಮೇಲೆ **ತಾತ್ಕಾಲಿಕ ಆಯ್ಕೆಪಟ್ಟಿ** ಯನ್ನು ಪ್ರಕಟಿಸಲಾಗಿದೆ . ಎಲ್ಲಾ ಸೆಮಿಸ್ಟರ್‌ಗಳ ಎಲ್ಲ ವಿಷಯಗಳ ಒಟ್ಟಾರೆ ಅಂಕಗಳನ್ನು ಗಣನೆಗೆ ತೆಗೆದುಕೊಂಡು ಶೇಕಡಾವಾರು ಅಂಕಗಳನ್ನು ನಿರ್ಧರಿಸಲಾಗಿದೆ.

ಇಲಾಖೆಯಿಂದ ಈ ಹಿಂದಿನ ವರ್ಷಗಳಲ್ಲಿ ಏರ್ಪಡಿಸಲಾದ ವೃತ್ತಿ ಕೌಶಲ್ಯ ತರಬೇತಿ ಕಾರ್ಯಕ್ರಮಗಳಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ಪರಿಗಣಿಸಿಲ್ಲ.

ಆಯ್ಕೆಪಟ್ಟಿ ಕುರಿತು ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಫೆಬ್ರವರಿ 06, 2017 ರೊಳಗಾಗಿ ಲಿಖಿತ ರೂಪದಲ್ಲಿ ಇಲಾಖೆ ಕೇಂದ್ರ ಕಚೇರಿ 'ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ', ವಾರ್ತಾ ಸೌಧ, ನಂ17, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು–560 001 ಇಲ್ಲಿ ಸಲ್ಲಿಸುವುದು ಅಥವಾ koushalyatraining2017@gmail.com ಗೆ ಮೇಲ್ ಮೂಲಕವೂ ಆಕ್ಷೇಪಣೆಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯ ದೂರವಾಣಿ ಸಂಖ್ಯೆ 22028034 ಅನ್ನು ಸಂಪರ್ಕಿಸುವುದು.

**ಎಸ್‌ಎಂ./ಎಂಆರ್‌ಎಂ:ಜಿಪಿಆರ್.**

## ಪ್ರವಾಸ

**ಬೆಂಗಳೂರು, ಫೆಬ್ರವರಿ 1, (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಕುಮಾರಿ ನಾಗಲಕ್ಷ್ಮೀ ಬಾಯಿ ಅವರು ಫೆಬ್ರವರಿ 2 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರವಾಸ ಮಾಡುವರು.

ಜೆಡಿ/ಕೆಎಂ

## ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಮತ್ತು ವರದಿ ನೀಡುವ ತಜ್ಞರ ಸಮಿತಿಯ ಪ್ರವಾಸ

**ಬೆಂಗಳೂರು, ಫೆಬ್ರವರಿ 1, (ಕರ್ನಾಟಕ ವಾರ್ತೆ)**

ದಿನಾಂಕ: 02-02-2017 ರಂದು ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಮತ್ತು ವರದಿ ನೀಡುವ ತಜ್ಞರ ಸಮಿತಿಯು ಸಮಿತಿಯ ಅಧ್ಯಕ್ಷರು ಮತ್ತು ವಿಧಾನ ಪರಿಷತ್ತಿನ ಸದಸ್ಯರೂ ಆದ ವಿ.ಎಸ್. ಉಗ್ರಪ್ಪ ಅವರು ಮೈಸೂರು ಮತ್ತು ಹೆಗ್ಗಡದೇವನ ಕೋಟೆ ತಾಲ್ಲೂಕಿಗೆ ಭೇಟಿ ನೀಡಿ, ದಿನಾಂಕ: 30-1-2017 ರಂದು ಹೆಚ್.ಡಿ. ಕೋಟೆ ತಾಲ್ಲೂಕಿನ ಭೀಮನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕುಂಟೇರಿ ಹಾಡಿಯಲ್ಲಿ ಮೂರು ವರ್ಷದ ಮಗುವಿನ ಮೇಲೆ ಹಾಡಿಯ ದೊಡ್ಡಹೈದ ಎಂಬಾಗ ಅತ್ಯಾಚಾರ ಎಸಗಿರುವ ಪ್ರಕರಣವನ್ನು ಪರಿಶೀಲಿಸಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 5 ಹಿಂದುಳಿದ ವರ್ಗಗಳ ಅಭಿವೃದ್ಧಿಗೆ 50 ಕೋಟಿ ರೂ : ಸಿದ್ದರಾಮಯ್ಯ

ಮೈಸೂರು,ಫೆ.1.(ಕರ್ನಾಟಕ ವಾರ್ತೆ):- ಹಿಂದುಳಿದ ವರ್ಗಗಳಾದ ಉಪ್ಪಾರ, ಮಡಿವಾಳ, ತಿಗಳ, ಸವಿತಾ ಹಾಗೂ ಕಂಬಾರ ಸಮಾಜದವರ ಅಭಿವೃದ್ಧಿಗಾಗಿ ತಲಾ 10 ಕೋಟಿ ರೂ. ಗಳಂತೆ 50 ಕೋಟಿ ರೂ. ಬಿಡುಗಡೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ಮೈಸೂರಿನ ಜೆ.ಕೆ ಮೈದಾನದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಾಚಿದೇವರ ಜಯಂತ್ಯೋತ್ಸವ ಹಾಗೂ ಬೃಹತ್ ಜಾಗೃತ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಅನ್ನಪೂರ್ಣ ಅವರ ವರದಿಯ ಆಧಾರದ ಮೇಲೆ ಮಡಿವಾಳ ಜಾತಿಯನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕು ಎಂದ ಮನವಿ ತಮಗೆ ಬಂದಿದ್ದು, ಈ ಬಗ್ಗೆ ಕ್ಯಾಬಿನೆಟ್ ಸಭೆ ಕರೆದು ಸಭೆಯಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಮುಂದಿನ ಸಾಲಿನ ಫೆಬ್ರವರಿ 1 ರಿಂದ ಸರ್ಕಾರದ ವತಿಯಿಂದ ಮಾಚಿದೇವರ ಜಯಂತ್ಯೋತ್ಸವವನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಚರಿಸಲಾಗುವುದು. ಈ ಬಗ್ಗೆ ಸರ್ಕಾರದಿಂದ ಆದೇಶ ಹೊರಡಿಸಲಾಗುವುದು ಎಂದರು.

ಬಿಜಾಪುರದಲ್ಲಿರುವ ದೇವರ ಹಿಪ್ಪರಗಿ ಕ್ಷೇತ್ರದ ಅಭಿವೃದ್ಧಿಗಾಗಿ ಈಗಾಗಲೇ ಸರ್ಕಾರದಿಂದ 3 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ಹಿಂದುಳಿದ ವರ್ಗಗಳು ಶೈಕ್ಷಣಿಕವಾಗಿ ಅಭಿವೃದ್ಧಿಯಾಗಬೇಕು ಇದಕ್ಕಾಗಿ ಹಿಂದುಳಿದ ವರ್ಗದವರ ಶಿಕ್ಷಣಕ್ಕಾಗಿ ಶಿಕ್ಷಣ ಸಂಸ್ಥೆ ಅಥವಾ ಹಾಸ್ಟೆಲ್ ತೆರೆಯಲು ಸರ್ಕಾರದಿಂದ ಸಹಾಯಧನ ಒದಗಿಸಲಾಗುವುದು ಎಂದರು.

ಶೋಷಿತ ವರ್ಗದವರು ಶಿಕ್ಷಣ ಸಂಘಟನೆ, ಹೋರಾಟಗಳ ಮೂಲಕ ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಬೆಳೆಯಲು ಸಾಧ್ಯ. ಶೋಷಿತ ವರ್ಗದವರು ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು. ಸಂಘಟಿತರಾದಾಗ ತಮ್ಮಲ್ಲಿರುವ ತೊಂದರೆಗಳ ಬಗ್ಗೆ ಚರ್ಚಿಸಿ ಹೋರಾಟ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಸಮಾಜದಲ್ಲಿರುವ ಜಾತಿ ವ್ಯವಸ್ಥೆಯನ್ನು ಹೋಗಲಾಡಿಸಲು ಹಲವಾರು ಶಾಂತರು ದಾರ್ಶನಿಕರು, ದಾಸರು ತಮ್ಮ ಭೋದನೆ ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ಜಾತಿರಹಿತ ಹಾಗೂ ವರ್ಗರಹಿತ ಸಮಾಜ ನಿರ್ಮಾಣ ಬಾಬಾ ಸಹೇಬ್ ಅಂಬೇಡ್ಕರ್ ಅವರ ಕನಸು. ವೃತ್ತಿಯ ಆಧಾರದ ಮೇಲೆ ಜಾತಿ ಪದ್ಧತಿಯನ್ನು ಜಾರಿಗೆ ತರಲಾಗಿದೆ. ವೃತ್ತಿಯ ಕಾರಣದಿಂದ ಕೆಳವರ್ಗದವರು ಅಕ್ಷರದಿಂದ ವಂಚಿತರಾದರು ಹಾಗೂ ಕೆಳವರ್ಗದವರ ಜನಸಂಖ್ಯೆಯೇ ಹೆಚ್ಚು. ಹಿಂದುಳಿದ ವರ್ಗದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಸಮಾಜದಲ್ಲಿ ಜಾತಿರಹಿತ, ವರ್ಗರಹಿತ ಸಮ ಸಮಾಜ ನಿರ್ಮಾಣವಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಶಾಸಕರಾದ ಸೋಮಶೇಖರ್, ಹೆಚ್.ಪಿ.ಮಂಜುನಾಥ್ ಹಾಗೂ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.